**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಪ್ರಬುದ್ಧ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ನಿಗದಿಪಡಿಸಲಾಗಿದ್ದ GRE-GMAT ಅರ್ಹತಾ ಪರೀಕ್ಷೆಯನ್ನು ಕೈಬಿಡುವ ಕುರಿತು.

ಓದಲಾಗಿದೆ: SWD-PETCOS-6(FS)/3/2023-PETC SOCIAL WELFARE COMMISSIONER (E-1032772), ಬೆಂಗಳೂರು ದಿನಾಂಕ: 15-05-2023.

ಮೇಲೆ ಓದಲಾದ ಸರ್ಕಾರಿ ಆದೇಶದಲ್ಲಿ ಪ್ರಬುದ್ಧ ಯೋಜನೆಯಲ್ಲಿ ಇಂಜಿನಿಯರಿಂಗ್ ಹಾಗೂ ಇತರೆ ಕೋರ್ಸ್‌ಗಳನ್ನು ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಅಧ್ಯಯನ ಮಾಡಲು ಬಯಸುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು GRE/GMAT/IELTS/TOEFL ಮತ್ತು PTE ಅರ್ಹತಾ ಪರೀಕ್ಷೆಯನ್ನು ನಿಗದಿಪಡಿಸಲಾಗಿದೆ. ಈ ಅರ್ಹತಾ ಮಾನದಂಡವನ್ನು ಕೈಬಿಡಲು ನಿರ್ಧರಿಸಿ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: SWD-PETC0S-6(FS)/23/2023-PETC (E-1159105), ಬೆಂಗಳೂರು ದಿನಾಂಕ: 27-11-2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಪ್ರಬುದ್ಧ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿ ಆಯ್ಕೆ ಮಾಡಲು ನಿಗದಿಪಡಿಸಲಾಗಿದ್ದ GRE/GMAT/IELTS/TOEFL ಮತ್ತು PTE ಅರ್ಹತಾ ಪರೀಕ್ಷೆಯ ಮಾನದಂಡವನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

27/11

(ಎಲ್.ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-1
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ,**

1. ಮಹಾಲೇಖಪಾಲರು (ಎ&ಇ, ಲೆಕ್ಕಪರಿಶೋಧನೆ 1&2), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು.